## 12. ಬೆಂಗಳೂರು ಕಟ್ಟಿದ ಕೆಂಪೇಗೌಡರ ಮೌಲ್ಯ ಚಿರಸ್ಥಾಯಿಯಾಗಬೇಕು

ಬೆಂಗಳೂರು ನಿರ್ಮಾತೃ ಕೆಂಪೇಗೌಡರನ್ನು ಪ್ರತಿಯೊಬ್ಬರೂ ಸ್ಮರಿಸುವುದು ಸಹಜವೇ. ಆದರೆ ಅವರ ಆಡಳಿತ ಅಭಿವೃದ್ಧಿಯ ದೃಷ್ಟಿ ಕೃಷಿಗೆ ನೀಡಿದ ಮಹತ್ವ ಸ್ಮರಣೀಯ. ನಾಡಪ್ರಭು ಕೆಂಪೇಗೌಡರ ಜಯಂತಿ ಮತ್ತೆ ಬಂದಿದೆ. ಕೇವಲ ಜಯಂತಿಯಂದು ಮಾತ್ರವಲ್ಲದೆ, ನಾಡಿನ ಪ್ರತಿಯೊಬ್ಬರೂ ಅನುದಿನವೂ ಸ್ಮರಿಸಬೇಕಾದ ಪ್ರಾತ:ಸ್ಮರಣೀಯರಲ್ಲಿ ಅಗ್ರಮಾನ್ಯರು ನಮ್ಮ ನಾಡಪ್ರಭುಗಳು. ಅಪ್ರತಿಮ ಆಡಳಿತಗಾರರೂ, ಪ್ರಖರ ದೂರದೃಷ್ಟಿಯುಳ್ಳವರೂ ಆಗಿದ್ದ ಅವರು, ಐದು ಶತಮಾನಗಳ ಹಿಂದೆ ಕಟ್ಟಿದ ಬೆಂಗಳೂರೆಂಬ ಕನಸಿನ ನಗರಿಯಲ್ಲಿ ನಾವೆಲ್ಲರೂ ಇದ್ದೇವೆ. ನಾನು ಅವರ ಪ್ರಭಾವದಲ್ಲೇ ಇದ್ದೇನೆ ಮಾತ್ರವಲ್ಲದೇ, ಅದೆಷ್ಟೋ ವಿಷಯಗಳ ಬಗ್ಗೆ ಚಕಿತನಾಗಿದ್ದೇನೆ.

ಮಾನ್ಯ ಮುಖ್ಯಮಂತ್ರಿಗಳಾದ ಯಡಿಯೂರಪ್ಪ ಅವರು ನನಗೆ ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರದ ಉಪಾಧ್ಯಕ್ಷ ಸ್ಥಾನ ನೀಡಿ ನಾಡಪ್ರಭುಗಳ ವಿಷಯದಲ್ಲಿ ಆಗಬೇಕಿರುವ ಎಲ್ಲ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಸೂಚಿಸಿದ್ದನ್ನು ಶಿರಸಾವಹಿಸಿ ಮಾಡುತ್ತಿದ್ದೇನೆ. ಮೂಲತ: ಪ್ರಭುಗಳ ವೀರಸಮಾಧಿಯುಳ್ಳ ಕೆಂಪಾಪುರಕ್ಕೆ ಅನತಿದೂರದ ಗ್ರಾಮದಲ್ಲಿ ಹುಟ್ಟಿದ ನಾನು ಬಾಲ್ಯದಿಂದಲೇ ಪ್ರಭುಗಳ ಕಥೆಗಳನ್ನು ಅವರ ಸಾಹಸಗಾಥೆಗಳನ್ನು ಕೇಳುತ್ತ ಬೆಳೆದವನು. ನಮ್ಮ ತಾಯಿ-ತಂದೆ ಹೇಳುತ್ತಿದ್ದ ಕಥೆಗಳು ನನ್ನ ಸ್ಮೃತಿಪಟಲದಲ್ಲಿ ಪಟ್ಟಾಗಿ ಅಚ್ಚೊತ್ತಿದೆ.

ಜೀವನದಲ್ಲಿ ನನ್ನ ಪಯಣದ ಪಥಗಳೂ ಬದಲಾಗುತ್ತಿದ್ದಂತೆಯೇ ನನಗೆ ಕೆಂಪೇಗೌಡರ ಕುರಿತಾದ ಆಸಕ್ತಿ, ಅವರ ಬಗ್ಗೆ ಅಧ್ಯಯನಶೀಲತೆ ಉತ್ಕಟತೆಯೂ ಹೆಚ್ಚಾಯಿತು. ಅದರಲ್ಲೂ ಶಾಸಕನಾದ ಮೇಲೆ, ಮಲ್ಲೇಶ್ವರ ಕ್ಷೇತ್ರದ ಮಹಾಜನತೆಯ ಆಶೋತ್ತರಗಳನ್ನು ಈಡೇರಿಸಲು ವಿವಿಧ ಕಾರ್ಯಕ್ರಮಗಳನ್ನು ಹಾಕಿಕೊಂಡಾಗಲೆಲ್ಲ ಕೆಂಪೇಗೌಡರ ದಾರ್ಶನಿಕತೆ, ಅವರ ಅಭಿವೃದ್ಧಿಶೀಲತೆಯೂ ನನ್ನನ್ನೂ ಬಹುವಾಗಿ ಕಾಡಿದ್ದರಲ್ಲಿ ಅತಿಶಯವಿಲ್ಲ. ಐದು ಶತಮಾನಗಳೇ ಆಗಿಹೋದ ಮೇಲೆಯೂ ಅವರ ಅಭಿವೃದ್ಧಿಯ ಕುರುಹುಗಳು ಅಚ್ಚಳಿಯದೇ ಉಳಿದಿದೆ ಎಂದರೆ ಅವರಿಂದ ಪ್ರಭಾವಿತನಾಗದೇ ಇರಲು ಹೇಗೆ ಸಾಧ್ಯ.

ವಿಜಯನಗರ, ಅದರಲ್ಲೂ ಶ್ರೀಕೃಷ್ಣದೇವರಾಯರ ಸಮಕಾಲೀನರಾಗಿ ಅವರ ಸಾಮ್ರಾಜ್ಯದ ದಕ್ಷಿಣದಲ್ಲಿ ರಾಮರಾಜ್ಯದಂತ ಆಡಳಿತ ನಡೆಸಿದ ಕೆಂಪೇಗೌಡರ ಬಗ್ಗೆ ಇನ್ನಷ್ಟು ಆಳವಾದ ಅಧ್ಯಯನ ಆಗಬೇಕಿದೆ. ಬೆಂಗಳೂರು ಕಟ್ಟಿದರೆಂಬ ವಿಷಯಕ್ಕಿಂತ ನಂಬಿಕೆ, ಆತ್ಮವಿಶ್ವಾಸ, ನಿಷ್ಠೆ ಮತ್ತು ಮೌಲ್ಯ ಎಂಬ ನಾಲ್ಕು ತತ್ವಗಳ ಮೇಲೆ ಆಡಳಿತವನ್ನು ನಿಲ್ಲಿಸಿದ್ದ ಅವರು, ಜನಪರವಾಗಿ ಕೆಲಸ ಮಾಡಿದ್ದು ಹಾಗೂ ಜೀವಿತದುದ್ದಕ್ಕೂ ಈ ತತ್ವಗಳನ್ನು ಮೀರಿ ನಡೆಯದಿರುವುದು ನನ್ನ ಯೋಚನೆಗಳಲ್ಲಿ ಬದಲಾವಣೆ ತಂದ ಅಂಶಗಳಲ್ಲಿ ಪ್ರಮುಖವು ಎಂದು ನಿಸ್ಸಂಶಯವಾಗಿ ಹೇಳಬಲ್ಲೆ.

ಕುಟಿಲತೆ ಇಲ್ಲದ ರಾಜನೀತಿ, ವಿಸ್ತರಣಾವಾದವಿರದ ರಣನೀತಿ ಇವತ್ತಿಗೂ ಕೆಂಪೇಗೌಡರನ್ನು ರಾಜಕೀಯವಾಗಿಯೂ ಅಜರಾಮರರನ್ನಾಗಿ ಮಾಡಿದೆ. ಅಭಿವೃದ್ಧಿಯ ಅಜೆಂಡಾದೊಂದಿಗೆ ಸಾಗಿದ ಅವರು ಓರ್ವ ಸ್ವತಂತ್ರ ದೊರೆ ಅಥವಾ ಚಕ್ರವರ್ತಿಯೂ ಮಾಡಲು ಸಾಧ್ಯವಾಗದ್ದನ್ನು ನಮಗಾಗಿ ಮಾಡಿಟ್ಟು ಹೋಗಿದ್ದಾರೆ. 59 ವರ್ಷಗಳ ಅವರ ಅವಿಚ್ಛಿನ್ನ ಆಡಳಿತದಲ್ಲಿ ತಲೆತಲೆಮಾರು ಮರೆಯದ ಅದೆಷ್ಟೋ ಮೈಲುಗಲ್ಲುಗಳು ಸ್ಥಾಪನೆಯಾಗಿದ್ದವು. ಇವತ್ತಿನ ಒಕ್ಕೂಟ ವ್ಯವಸ್ಥೆಯಲ್ಲಿ ಕೆಲಸ ಮಾಡುತ್ತಿರುವ ಪ್ರತಿಯೊಬ್ಬ ನಾಯಕನೂ ಕೆಂಪೇಗೌಡರಿಂದ ಕಲಿಯಲೇಬೇಕಾದ್ದು ಬಹಳಷ್ಟಿದೆ.

ಕೆಂಪೇಗೌಡ ಬೆಂಗಳೂರು ಮತ್ತದರ ಸುತ್ತಮುತ್ತಲಿನ ಪ್ರದೇಶವನ್ನು ಪ್ರಗತಿಪಥದತ್ತ ಕೊಂಡೊಯ್ದರು. ಅತ್ತ ರಾಜಕೀಯ ಮೌಲ್ಯಗಳಿಗೆ ಬೆಲೆ ಕೊಡುತ್ತಲೇ ಮತ್ತೊಂದೆಡೆ ತಮ್ಮ ಪರಿಪಾಲನೆಯ ನೆಲದ ಅಭಿವೃದ್ಧಿಗೆ ಒತ್ತು ನೀಡಿದರು. ಹೀಗಾಗಿ ರಾಜಕೀಯವಾಗಿಯೂ ಕೆಂಪೇಗೌಡರು ವರ್ತಮಾನದ ಪ್ರತಿಯೊಬ್ಬ ನಾಯಕನಿಗೂ ಮಾರ್ಗದರ್ಶಿ ಮತ್ತು ಆದರ್ಶ, ರಾಜಕೀಯ ವಿದ್ಯಾರ್ಥಿಗಳು ಈ ಹಿನ್ನೆಲೆಯಲ್ಲಿ ಗೌಡರನ್ನು ಅಧ್ಯಯನ ಮಾಡಬೇಕಿದೆ.

**ಹೊಸ ತಲೆಮಾರಿಗೆ ಹೇಳಬೇಕು:** ನನ್ನ ಬಹು ಆಸೆ ಎಂದರೆ ಕೆಂಪೇಗೌಡರನ್ನು ಈಗಿನ ಹಾಗೂ ನಂತರದ ತಲೆಮಾರಿನ ಯುವಜನತೆಗೆ ಪರಿಚಯಿಸಬೇಕು. ಅಂತಿಮವಾಗಿ ನನ್ನ ಆಸೆ ಇಷ್ಟೇ. ಮುಂದಿನ ತಲೆಮಾರುಗಳು

ಕೆಂಪೇಗೌಡರ ಬಗ್ಗೆ ಮಾತನಾಡಬೇಕು. ನವಯುಗದ ಯುವಕ ಯುವತಿಯರಿಗೆ, ದೇಶ ವಿದೇಶಗಳ ಜನರು ನಾಡಪ್ರಭುಗಳ ಬಗ್ಗೆ ತಿಳಿಯಬೇಕು. ಅವರ ಅಭಿವೃದ್ಧಿಯ ಮಾದರಿ, ಜನಪರ ಆಡಳಿತ, ರಾಜಕೀಯ ಮೌಲ್ಯಗಳು, ವ್ಯಾಪಾರ–ವಾಣಿಜ್ಯ ಚಟುವಟಿಕೆ, ಪರಿಸರ ಪ್ರೀತಿ ಇತ್ಯಾದಿಗಳು ಚಿರಸ್ಥಾಯಿಯಾಗಿ ಉಳಿಯಬೇಕು. ಇಷ್ಟು ಸಾಕಾರವಾದರೆ ಅದಕ್ಕಿಂತ ಧನ್ಯತೆ ಬೇರೆನಿದೆ.

ಲೇಖಕರು: ಡಾ:ಸಿ.ಎನ್. ಅಶ್ವತ್ಥ ನಾರಾಯಣ,
ಉಪ ಮುಖ್ಯಮಂತ್ರಿ ಹಾಗೂ
ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರದ ಉಪಾಧ್ಯಕ್ಷರು.
ಆಧಾರ:ಉದಯವಾಣಿ, ದಿನಾಂಕ: 27.06.2020